ಓಎಸ್. 7/2018

ಪಿಡಬ್ಲ್ಯು-1

ದಿನಾಂಕ 01.04.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

**ಪಾಟೀ ಸವಾಲುಃ- ಶ್ರೀ.ಸಿ.ಎಸ್.ಜೆ. ವಕೀಲರಿಂದಃ-**

ದಾವಾ ಬಿ ಅನೂಸೂಚಿ ಸ್ವತ್ತನ್ನು ಪ್ರತಿವಾದಿಗಳು ಒತ್ತುವರಿ ಮಾಡಿರುವ ಬಗ್ಗೆ ನಿಶಾನೆ ಪಿ. 2 ರಲ್ಲಿ ನಮೂದಿಸಿರುವುದಿಲ್ಲ ಎಂದರೆ ಸರಿ. ನಿಶಾನೆ ಪಿ. 1 ನನ್ನ ತಂದೆಯ ಹೆಸರಿನಲ್ಲಿ ಮಾತ್ರ ಇದೆ ಎಂದರೆ ಸರಿ. ದಾವಾ ಸ್ವತ್ತಿಗೆ ಸಂಬಂಧಿಸಿದಂತೆ ಕಂದಾಯ ನಿಗದಿ ಮಾಡಿರುವ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ. ನಿಶಾನೆ ಪಿ. 1 ರಿಂದ 4 ರಲ್ಲಿ ಕಂದಾಯ ರಶೀದಿಗಳು ಇರುವುದಿಲ್ಲ ಎಂದರೆ ಸರಿ. ಪ್ರತಿವಾದಿಗಳು ತಾವು ಖರೀದಿ ಮಾಡಿದ ಜಾಗದಲ್ಲಿ ಮನೆ ಕಟ್ಟಿಕೊಂಡು ವಾಸವಾಗಿದ್ದಾರೆ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿಯ ಗಂಡ 7-8 ವರ್ಷಗಳ ಹಿಂದೆ ಮೃತರಾಗಿರಬಹುದು. 1 ನೇ ಪ್ರತಿವಾದಿಯು ವಿಧವೆಯಾಗಿದ್ದು, ಆಕೆಗೆ 3-4 ಜನ ಹೆಣ್ಣು ಮಕ್ಕಳಿದ್ದು, ಅವರ ದೌರ್ಬಲ್ಯದ ಲಾಭ ಪಡೆದು, ಅವರ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿಯ ಗಂಡ ತಾನು ಖರೀದಿಸಿರುವ ಜಾಗದ ಸುತ್ತಲೂ ಬೇಲಿ ಹಾಕಿಸಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 2017 ರಲ್ಲಿ ಬೇಲಿಯನ್ನು ಹಾಕಿರುತ್ತಾರೆ ಎಂದು ಉತ್ತರಿಸಿರುತ್ತಾರೆ. 1 ನೇ ಪ್ರತಿವಾದಿಯ ಗಂಡ ಖರೀದಿಸಿರುವ ಜಾಗದಲ್ಲಿ 20 ವರ್ಷಗಳ ಕಾಫಿ ಗಿಡಗಳಿವೆ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳ ವಿರುದ್ದ ಸುಳ್ಳು ದಾವೆಯನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ

(ಸಾಕ್ಷಿದಾರರ ಸಹಿ) ಸಹಿ

ಹಿರಿಯ ಸಿವಿಲ್ ನ್ಯಾಯಾಧೀಶರು
ವಿರಾಜಪೇಟೆ.

ಓಎಸ್. **7/2018**
ಪಿಡಬ್ಲ್ಯು-**1**